# ಹಂಪಿ ಟೈಮ್ಸ್

HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

epaper.hampitimes.com | e-mail: hampitimes@gmail.com | M:94486 33038 Reg.No.PMG/KA/NK/BLY/01/2024-2026

ಸಂಪುಟ:02 Volume:02 • ಸಂಚಿಕೆ: 222 Issue: 222 • ಪಿ.ಆರ್.ಜಿ.ಐ.ನಂ.:KARKAN/2023/88055 PRGI No:KARKAN/2023/88055 • ವಿಜಯನಗರ VIJAYANAGARA • 08.03.2025 • ಶನಿವಾರ Saturday • ಪುಟ:04 Page:04 • ಬೆಲೆ:2 Rs:2












## ದೇವಾಲಯ ದರ್ಶನ



ಹಂಪಿ ಶ್ರೀ ವಿರೂಪಾಕ್ಷೇಶ್ವರ ದರ್ಶನ

ನಿತ್ಯ ಅಭಿಷೇಕ ಸಮಯ
ಬೆಳಿಗ್ಗೆ: 6:30, 10:30 ಸಂಜೆ 6:30ಕ್ಕೆ

-: ದರ್ಶನ ಸಮಯ :-
ಬೆಳಿಗ್ಗೆ 6.30 ರಿಂದ ಮಧ್ಯಾಹ್ನ 1.15ರವರೆಗೆ
ಮಧ್ಯಾಹ್ನ 3 ರಿಂದ ರಾತ್ರಿ 7.30ರವರೆಗೆ

# ಬಹುತ್ವ ಅರಿಯಲು ಭಾಷಾಂತರ ಅಗತ್ಯ

## ಕನ್ನಡ ವಿವಿ ಅಲುಮ್ನಿ ಸದಸ್ಯ ಬಸವರಾಜ್ ಟಿ.ಎಚ್ ಹೇಳಿಕೆ | ಭಾಷಾಂತರ ತರಬೇತಿ ಕಮ್ಮಟ

■ **ಹಂಪಿ ಟೈಮ್ಸ್ ಹೊಸಪೇಟೆ**

ಹಲವಾರು ರಾಜ್ಯಗಳನ್ನು ಹೊಂದಿದ ಬಹುತ್ವ ಭಾರತದಲ್ಲಿ ಸಂಸ್ಕೃತಿ, ಭಾಷೆ, ಆಚಾರ ವಿಚಾರ ಭಿನ್ನವಾಗಿವೆ ಅದನ್ನು ನಾವು ತಿಳಿಯಬೇಕಾದರೆ ಭಾಷಾಂತರವನ್ನು ಕಲಿಯಬೇಕು ಎಂದು ಕನ್ನಡ ವಿಶ್ವವಿದ್ಯಾಲಯದ ಹಳೆಯ ವಿದ್ಯಾರ್ಥಿ ಸಂಘದ ಪದಾಧಿಕಾರಿ ಮಂಡಳಿ ಸದಸ್ಯ ಬಸವರಾಜ್ ಟಿ.ಎಚ್ ಅವರು ತಿಳಿಸಿದರು.

ಕನ್ನಡ ವಿಶ್ವವಿದ್ಯಾಲಯದ ನುಡಿ ಕಟ್ಟಡದಲ್ಲಿ ಶುಕ್ರವಾರ ಭಾಷಾಂತರ ಕೇಂದ್ರ ಮತ್ತು ಆಂತರಿಕ ಗುಣಮಟ್ಟ ಭರವಸೆ ಕೋಶ ಹಾಗೂ ಭಾಷಾಂತರ ಅಧ್ಯಯನ ವಿಭಾಗ ಅಲುಮ್ನಿ ಇವರ ಸಹಯೋಗದಲ್ಲಿ ಮೂರು ದಿನಗಳ ಭಾಷಾಂತರ ತರಬೇತಿ ಕಮ್ಮಟ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡುತ್ತಾ, ಅನುವಾದದಲ್ಲಿ ಮೂಲಕೃತಿಗೆ ಹಲವಾರು ಬಾರಿ ಧಕ್ಕೆ ಉಂಟಾಗುವ ಸಾಧ್ಯತೆ ಇರುತ್ತದೆ, ಅದನ್ನು ಅರಿತುಕೊಳ್ಳಬೇಕು. ಇಂಗ್ಲೀಷ್ ಭಾಷೆಯಲ್ಲಿ ನಾವು ಒಮ್ಮೆಲೇ ಧುಮುಕುತ್ತಿದ್ದೇವೆ. ನಿಧಾನವಾಗಿ. ಸರಳವಾಗಿ ಅರ್ಥ ಮಾಡಿಕೊಂಡು ಕಲಿಯಬೇಕು ಎಂದರು. ಇಂಗ್ಲಿಷ್‌ನ ಬಹುದೊಡ್ಡ ಬರಹಗಾರರಾದ ಜಾರ್ಜ್ ಬರ್ನಾಡ್ ಶಾ ಎಲ್ಲರಿಗೂ ಇಂಗ್ಲಿಷ್ ಬರುತ್ತದೆ. ಆದರೆ ಅದನ್ನು ಒಪ್ಪುವ ರೀತಿ ನಮಗೆ ಕಷ್ಟವಾಗುತ್ತಿದೆ ಎಂದು ಹೇಳಿದ್ದಾರೆ. ಬೇರೆ ದೇಶಗಳಲ್ಲಿ ಒಂದೇ ರೀತಿಯ ಇಂಗ್ಲಿಷ್ ಮಾತನಾಡುವವರು ಸಿಗುವುದು ಕಷ್ಟ. ಅವರು



ಮಾತನಾಡುವ ಶೈಲಿ ಭಿನ್ನವಾಗಿರುತ್ತದೆ. ಭಾಷೆಯು ಬಳಕೆಯಿಂದ ಬರುತ್ತದೆ ವಿನಹ ಓದಿದರೆ, ಬರೆದರೆ ಬರುವುದಿಲ್ಲ. ಸ್ಪರ್ಧಾತ್ಮಕ ಜಗತ್ತಿನಲ್ಲಿ ಅನಿವಾರ್ಯದ ತೂಗುಗತ್ತಿಯಾಗಿ ಇಂಗ್ಲಿಷ್ ನಿಂತಿದೆ ಎಂದರು.

ಭಾಷಾಂತರ ಕೇಂದ್ರ ಮತ್ತು ಐ.ಕ್ಯೂ.ಎಸಿ ನಿರ್ದೇಶಕರಾದ ಡಾ.ಎ. ಮೋಹನ್ ಕುಂಟಾರ್ ಪ್ರಾಸ್ತಾವಿಕ ಮಾತನಾಡುತ್ತಾ, ಪ್ರತಿ ವರ್ಷ ಎಂ.ಎ ವಿದ್ಯಾರ್ಥಿಗಳಿಗಾಗಿ ಭಾಷಾಂತರ ತರಬೇತಿ ಕಮ್ಮಟವನ್ನು ಹಮ್ಮಿಕೊಳ್ಳಲಾಗುತ್ತದೆ. ರಾಜ್ಯದ ನಾನಾ ಕಡೆಗಳಿಂದ ಬಂದಿರುವ ವಿದ್ಯಾರ್ಥಿಗಳಿಗೆ ಇಂಗ್ಲೀಷ್‌ನಿಂದ ಕನ್ನಡಕ್ಕೆ ಅನುವಾದ ಮಾಡುವುದನ್ನು ಹೇಳಿಕೊಡಲಾಗುತ್ತದೆ. ಭಾಷಾಂತರ ಎನ್ನುವುದು ಕೇವಲ ತರಗತಿಯ ಚಟುವಟಿಕೆ ಮಾತ್ರ ಅಲ್ಲ ಇದನ್ನು ವಿಸ್ತರಿಸಬೇಕು. ಇಂಗ್ಲಿಷ್ ಒಂದೇ ಭಾಷೆ ಅಲ್ಲದೆ ನಮ್ಮ ಸಮೀಪದ ಭಾಷೆಗಳನ್ನು ತಿಳಿದುಕೊಂಡು ಅವುಗಳನ್ನು ಭಾಷಾಂತರ ಮಾಡುವ ಕಲೆಯನ್ನು ವಿದ್ಯಾರ್ಥಿಗಳು ಕಲಿತುಕೊಳ್ಳಬೇಕು. ಭಾಷಾ ಸಂಬಂಧಿಯಾಗಿ ಮಾಡುವ ಕಾರ್ಯಗಳಿಗೆ ಗೊಂದಲಗಳು ಬಂದಲ್ಲಿ ಮುಕ್ತವಾಗಿ ಸಂಪನ್ಮೂಲ ವ್ಯಕ್ತಿಗಳೊಂದಿಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಬಹುದು. ಭಾಷಾಂತರದಲ್ಲಿ ವೃತ್ತಿ ಸಾಧ್ಯತೆಯು ಬಹಳ ಇದೆ ಉಪಯೋಗ ಮಾಡಿಕೊಳ್ಳಬೇಕು ಎಂದು ಹೇಳಿದರು.

ಕನ್ನಡ ವಿಶ್ವವಿದ್ಯಾಲಯದ ಕನ್ನಡ ಭಾಷಾ ನಿಕಾಯದ ಡೀನರಾದ ಡಾ.ಎಫ್.ಟಿ. ಹಳ್ಳಿಕೇರಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಮಾತೃ ಭಾಷೆಯೊಂದಿಗೆ ಇನ್ನೊಂದು ಭಾಷೆಯನ್ನು ಕಲಿಯುವುದು ಇಂದಿನ ಕಾಲದಲ್ಲಿ ಮುಖ್ಯವಾಗಿದೆ. ಭಾಷಾಂತರ ಕಲೆಯನ್ನು ಹವ್ಯಾಸವಾಗಿ ಬೆಳೆಸಿದರೆ ಕಥೆ, ಕೃತಿ, ಲೇಖನಗಳನ್ನು ಬೇರೆ ಭಾಷೆಗೆ ಅನುವಾದ ಮಾಡುವುದು ಸುಲಭವಾಗುತ್ತದೆ. ವಿಶ್ವವಿದ್ಯಾಲಯ ಮಟ್ಟದಲ್ಲಿ ನಡೆಸುವ ಇಂತಹ ಭಾಷಾಂತರ ಕಮ್ಮಟಗಳು ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತವೆ ಎಂದರು.

ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಮುಖಸ್ಥರು, ಸಂಪನ್ಮೂಲ ವಿದ್ವಾಂಸರು, ಪ್ರಾಧ್ಯಾಪಕರು, ಬೋಧಕ, ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಐ.ಕ್ಯೂ.ಎ.ಸಿ. ಸಹಾಯಕ ನಿರ್ದೇಶಕರಾದ ಶ್ರೀಮತಿ ಡಿ. ಪ್ರಭಾ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

## ಮಾ.10 ರಂದು ಶ್ರೀಗೋಣಿಬಸವೇಶ್ವರ ಸ್ವಾಮಿ ರಥೋತ್ಸವ

**ಹಂಪಿ ಟೈಮ್ಸ್ ಹರಪನಹಳ್ಳಿ**

ಹರಪನಹಳ್ಳಿ ತಾಲೂಕಿನ ಕೂಲಹಳ್ಳಿ ಗ್ರಾಮದಲ್ಲಿ ಮಾರ್ಚ್ 10 ರಂದು ಶ್ರೀಗೋಣಿಬಸವೇಶ್ವರಸ್ವಾಮಿ ರಥೋತ್ಸವ ಮತ್ತು ಜಾತ್ರೋತ್ಸವ ನಿಮಿತ್ತ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಹಾಗೂ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಮದ್ಯ ಮಾರಾಟ ನಿಷೇಧಿಸಿ ಆದೇಶ ಹೊರಡಿಸಿದ್ದಾರೆ. ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 21 ರ ಅನ್ವಯ ಮಾರ್ಚ್.9 ರಂದು ಬೆಳಗ್ಗೆ 6 ಗಂಟೆಯಿಂದ ಮಾ.11 ರ ಬೆಳಗ್ಗೆ 6 ಗಂಟೆವರೆಗೆ ಹರಪನಹಳ್ಳಿ ಪೋಲೀಸ್ ಠಾಣಾ ಕೂಲಹಳ್ಳಿ ಗ್ರಾಮದ ಸುತ್ತಮುತ್ತಲಿನ ವ್ಯಾಪ್ತಿಯಲ್ಲಿ ಮದ್ಯಮಾರಾಟ ಮತ್ತು ಸಾಗಣಿಕೆ ಮಾಡದಂತೆ ಹಾಗೂ ಮದ್ಯದ ಅಂಗಡಿ, ಬಾರ್ ಮತ್ತು ರೆಸ್ಟೋರೆಂಟ್ ಮತ್ತು ಇತರೆ ಸ್ಥಳಗಳಲ್ಲಿ ಮದ್ಯಂಗಡಿಗಳನ್ನು ಮುಚ್ಚುವಂತೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

## ಇಂದು ನಾಳೆ ವಿದ್ಯುತ್ ವ್ಯತ್ಯಯ

**ಹಂಪಿ ಟೈಮ್ಸ್ ಕಂಪ್ಲಿ**

ಕಂಪ್ಲಿ ಜೆಸ್ಕಾಂ ವ್ಯಾಪ್ತಿಯಲ್ಲಿ ಕಂಪ್ಲಿ-ಹೊಸಪೇಟೆ ರಸ್ತೆ ಅಗಲೀಕರಣ, ವಿದ್ಯುತ್ ಮಾರ್ಗಗಳ ಸ್ಥಳಾಂತರ ಕಾಮಗಾರಿ ಕಾರ್ಯ ಕೈಗೊಳ್ಳುತ್ತಿರುವುದರಿಂದ ಮಾ.08 ಮತ್ತು 09 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಂ.10 ಮುದ್ದಾಪುರ, ಕಣಿವೆ ತಿಮ್ಮಾಪುರ, ರಾಮಸಾಗರ, ಎಲ್ಲಮ್ಮ ಕ್ಯಾಂಪ್ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ವಾಗಲಿದೆ ಬೆಳಿಗ್ಗೆ 4 ಗಂಟೆಯಿಂದ ವಿದ್ಯುತ್ ಸರಬರಾಜು ಮಾಡಲಾಗುವುದು ಎಂದು ಕಂಪ್ಲಿ ಜೆಸ್ಕಾಂನ ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

## ಪರಿಸರ ಸಾರ್ವಜನಿಕ ಆಲಿಕೆ ಸಭೆ

### ಏ.9ರಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅಧ್ಯಕ್ಷತೆಯಲ್ಲಿ ಸಭೆ

■ **ಹಂಪಿ ಟೈಮ್ಸ್ ಸಂಡೂರು**



ಸಂಡೂರು ತಾಲ್ಲೂಕಿನ ಜೈಸಿಂಗ್ ಪುರ ಗ್ರಾಮದಲ್ಲಿ ಜೆ.ಎಸ್.ಡಬ್ಲ್ಯೂ ಸ್ಟೀಲ್ ಲಿಮಿಟೆಡ್ ಇವರು 'ಜೈಸಿಂಗ್ ಪುರ ಸೌಥ್ ಐರನ್ ಒರ್ ಬ್ಲಾಕ್' ನಲ್ಲಿ ವಾರ್ಷಿಕ 1.6 ಮಿಲಿಯನ್ ಟನ್ ಉತ್ಪಾದನಾ ಸಾಮರ್ಥ್ಯ ಕಬ್ಬಿಣದ ಗಣಿಗಾರಿಕೆ ಯೋಜನೆಯನ್ನು ಒಟ್ಟು 297.38 ಹೆಕ್ಟೇರ್ ಪ್ರದೇಶದಲ್ಲಿ ಗಣಿಗಾರಿಕೆಯನ್ನು 05 ಹಳೆಯ ಗುತ್ತಿಗೆಗಳು ವಿಲೀನಗೊಳಿಸುವ ಹರಾಜು ಅರಣ್ಯ ಪ್ರದೇಶದಲ್ಲಿ ಯೋಜನೆ ಕೈಗೊಳ್ಳಲು ಪ್ರಸ್ತಾವನೆ ಸಲ್ಲಿಸಿದ್ದು, ಇದರ ಸಂಬಂಧ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಏ.09 ರಂದು ಬೆಳಿಗ್ಗೆ 11 ಗಂಟೆಗೆ ಜೆ.ಎಸ್.ಡಬ್ಲ್ಯೂ ಸ್ಟೀಲ್ ಲಿಮಿಟೆಡ್ ಇವರು ಜೈಸಿಂಗ್ ಪುರ ಗ್ರಾಮ(ಜೈಸಿಂಗ್ ಪುರ ಸೌಥ್ ಬ್ಲಾಕ್)ದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲಾಗುವುದು.

ಸುತ್ತಮುತ್ತಲಿನ ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ, ಅಹವಾಲು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಸಿದ್ದೇಶ್ವರ ಬಾಬು ತಿಳಿಸಿದ್ದಾರೆ.

## ಉದ್ಯೋಗಾಕಾಂಕ್ಷಿಗಳಲ್ಲಿ ಇರಲಿ ನಿರಂತರ ಪ್ರಯತ್ನ

### ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹೇಳಿಕೆ | ಜಿಲ್ಲಾ ಮಟ್ಟದ ಉದ್ಯೋಗ ಮೇಳ

■ **ಹಂಪಿ ಟೈಮ್ಸ್ ಬಳ್ಳಾರಿ**

ಉದ್ಯೋಗ ಆಕಾಂಕ್ಷಿಗಳಲ್ಲಿ ಕ್ರಿಯಾಶೀಲ ಮನೋಭಾವ, ಸ್ಪರ್ಧಾತ್ಮಕ ಮನಸ್ಸು ಹಾಗೂ ನಿರಂತರ ಪ್ರಯತ್ನ ಇದ್ದಲ್ಲಿ ಉದ್ಯೋಗ ಪಡೆದುಕೊಳ್ಳುವುದರ ಮೂಲಕ ಬದುಕು ರೂಪಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಬೆಂಗಳೂರು, ಜಿಲ್ಲಾ ಕೌಶಲ್ಯ ಮಿಷನ್ ಇವರ ಸಂಯುಕ್ತಾಶ್ರಯದಲ್ಲಿ ನಗರದ ಶ್ರೀಮತಿ




ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ (ಸ್ವಾಯತ್ತ) ಕಾಲೇಜಿನಲ್ಲಿ ಸಂಜೀವಿನಿ-ಕೆ.ಎಸ್.ಆರ್.ಎಲ್.ಪಿ.ಎಸ್, ಡಿಡಿಯುಜಿಕೆವೈ ಯೋಜನೆಯಡಿ ಬುಧವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ಉದ್ಯೋಗ ಮೇಳ ಉದ್ಘಾಟಿಸಿ ಅವರು ಮಾತನಾಡಿದರು.

ಯುವ ಪೀಳಿಗೆಯು ಉದ್ಯೋಗ ಪಡೆದುಕೊಳ್ಳುವುದಷ್ಟೇ ಅಲ್ಲದೇ >>4





**Call Us for Advertisements**
Good Opportunity for Branding

ನಿಮ್ಮೂರ ಜಾತ್ರೆ ಉತ್ಸವಕ್ಕೆ ಸ್ವಾಗತ/ಶುಭಾಶಯ ಕೋರಲು ಬಯಸುವವರು

ಇಂದೇ ಸಂಪರ್ಕಿಸಿ

M:9448633038

ಕೊನೆ ಕ್ಷಣದವರೆಗೆ ಕಾದು ನಿರಾಶರಾಗಬೇಡಿ!
ಮೊದಲು ಬುಕ್ಕಿಂಗ್ ಮಾಡಿದವರಿಗೆ ಮೊದಲ ಆದ್ಯತೆ


## ಸೇವಾಕಾರ್ಯಕ್ಕೆ ಸದಾ ಸಹಕಾರ : ಡಿಸಿ ದಿವಾಕರ

### ವಿಜಯನಗರ ರೆಡ್ ಕ್ರಾಸ್ ಜಿಲ್ಲಾಧ್ಯಕ್ಷರಾಗಿ ಕೆ.ರವಿಶಂಕರ್, ಪ್ರಕಾರ್ಯದರ್ಶಿ ರೇಖಾ ಪ್ರಕಾಶ್ ಅವಿರೋಧ ಆಯ್ಕೆ




■ **ಹಂಪಿ ಟೈಮ್ಸ್ ಹೊಸಪೇಟೆ**

ವಿಜಯನಗರ ಜಿಲ್ಲೆಯ ಭಾರತೀಯ ರೆಡ್ ಕ್ರಾಸ್ ಘಟಕದ 2025-28 ನೇ ಸಾಲಿನ ನೂತನ ಜಿಲ್ಲಾ ಚೇರ್ಮನ್ ಆಗಿ ರವಿಶಂಕರ್ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಕೆ.ಎಂ.ರೇಖಾ ಪ್ರಕಾಶ್ ಅವರು ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾಧಿಕಾರಿ ಎಂ ಎಸ್ ದಿವಾಕರ್ ಅವರು ಘೋಷಿಸಿದರು.

ನಗರದ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಗುರುವಾರ ನಡೆದ ವಾರ್ಷಿಕ ಸರ್ವ ಸದಸ್ಯರ ಸಭೆಯಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾಧ್ಯಕ್ಷರು ಆದ ಎಂ.ಎಸ್.ದಿವಾಕರ್ ಅವರು ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಭಾರತೀಯ ರೆಡ್ ಕ್ರಾಸ್ ಸಂಸ್ಥೆಯು ಮಾನವೀಯತೆ ನೆಲಗಟ್ಟಿನಲ್ಲಿ ಕಾರ್ಯ ನಿರ್ವಹಿಸುವ ಸಾಮಾಜಿಕ ಸಂಸ್ಥೆಯಾಗಿದ್ದು, ಯಾವುದೇ ಲಾಭದಾಯಕ ಹುದ್ದೆಗಳು ಇರುವುದಿಲ್ಲ. ಇದೊಂದು ಮಾನವೀಯ ನೆಲಗಟ್ಟಿನಲ್ಲಿ ಕರ್ತವ್ಯ ನಿರ್ವಹಿಸಬೇಕಿದ್ದು ಸೇವೆಯೊಂದೇ ಮುಖ್ಯ ಧ್ಯೇಯುದ್ದೇಶವಾಗಿರುತ್ತದೆ. ರೆಡ್ ಕ್ರಾಸ್ ಜಿಲ್ಲಾ ಘಟಕಕ್ಕೆ ವಿಜಯನಗರ ಜಿಲ್ಲಾಡಳಿತವು ಸದಾ ಸಂಪೂರ್ಣ ಸಹಕಾರ ನೀಡುತ್ತದೆ ಎಂದು ತಿಳಿಸಿದರು.

**ನೂತನ ಪದಾಧಿಕಾರಿಗಳು:**

ವೈಸ್ ಚೇರ್ಮನ್ ಆಗಿ ಕಮಲ ಗುಮಾಸ್ತೆ, ಖಜಾಂಚಿಯಾಗಿ ಹರಿಪ್ರಸಾದ್, ರಾಜ್ಯ ಸಮಿತಿ ಸದಸ್ಯರಾಗಿ ಅನ್ನಪೂರ್ಣ ಸದಾಶಿವಾ, ನಿರ್ದೇಶಕರಾಗಿ ಸತ್ಯನಾರಾಯಣ, ಎಸ್.ಎಂ. ಗಿರೀಶ್, ಪ್ರಭಾಕರ್, ಮಹೇಂದ್ರ ಸೋನಿ, ಬಿಂದು ಮಲ್ಲಿಕಾರ್ಜುನ್, ರೆಹಮಾನ್, ಅನ್ನ ಪೂರ್ಣಾರೆಡ್ಡಿ ಇತರರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಘೋಷಿಸಿದರು.

ಈ ಸಂದರ್ಭದಲ್ಲಿ ನೂತನ ಪದಾಧಿಕಾರಿಗಳು ಪ್ರದ ಗ್ರಹಣ ಮಾಡಿದರು. ರವಿಶಂಕರ್ ಪ್ರಾಸ್ತಾವಿಕವಾಗಿ ಮಾತನಾಡಿದರು, ಸ್ವಾಗತಿಸಿದರು, ರೇಖಾ ಪ್ರಕಾಶ್, ಯಮುನಾ ಕುಲಕರ್ಣಿ, ಸತ್ಯನಾರಾಯಣ ನಿರ್ವಹಿಸಿದರು.

## ಇಂದು ರಾಷ್ಟ್ರೀಯ ಲೋಕ್ ಅದಾಲತ್ ಶೀಘ್ರ ಇತ್ಯಾರ್ಥಕ್ಕೆ ಸುವರ್ಣಾವಕಾಶ

■ **ಹಂಪಿ ಟೈಮ್ಸ್ ಬಳ್ಳಾರಿ**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಮಾ.08 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಸಲಾಗುವುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ಮಾ.08 ರಂದು ನಡೆಯುವ ಮೆಗಾ-ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ. ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಂಡು ತಮ್ಮ ವಿವಾದಗಳನ್ನು ಅಂತ್ಯಗೊಳಿಸಬಹುದು ಎಂದು ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಲೋಕ್ ಅದಾಲತ್ ಅಂಗವಾಗಿ ಪ್ರತಿದಿನ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ಪೂರ್ವಭಾವಿ ಬೈಠಕ್‌ಗಳು ನಡೆಯುತ್ತಲಿವೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿ ಅಥವಾ ದೂ.08392-278077 ಗೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಜೆಟ್‌ನಲ್ಲಿ ಕೌಶಲ್ಯ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆಗಳು

## ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್

**ಹಂಪಿ ಟೈಮ್ಸ್ ರಾಯಚೂರು**

ಜಾಗತಿಕ ಮಟ್ಟದಲ್ಲಿ ಸವಾಲು ಒಡ್ಡುವ ರೀತಿಯಲ್ಲಿ ನಮ್ಮ ಕರುನಾಡಿನ ಯುವ ಸಮೂಹವನ್ನು ತಯಾರು ಮಾಡುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೌಶಲ್ಯಾಭಿವೃದ್ಧಿ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆಗಳನ್ನು ನೀಡಿದ್ದಾರೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ ಹದಿನಾರನೇ ಬಜೆಟ್ ಮಂಡಿಸಿದ ನಂತರ ಸಚಿವರು ಪತ್ರಿಕಾ ಪ್ರಕಟಣೆಯಲ್ಲಿ ಅಭಿಪ್ರಾಯ ತಿಳಿಸಿದ್ದಾರೆ. ನಿರುದ್ಯೋಗಿಗಳಾಗಿರುವ ಪದವೀಧರರಿಗೆ ಹಾಗೂ ಡಿಪ್ಲೋಮ ಪಡೆದವರಿಗೆ ನಿರುದ್ಯೋಗ ಭತ್ಯೆಯನ್ನು ನೀಡಲು ನಮ್ಮ ಸರ್ಕಾರವು ಯುವನಿಧಿ ಯೋಜನೆಯನ್ನು ಅನುಷ್ಠಾನಗೊಳಿಸಿದೆ. ಈಗಾಗಲೇ ಸುಮಾರು 2.58 ಲಕ್ಷ ಯುವಕರು ಈ ಯೋಜನೆಯಡಿ ನೋಂದಾಯಿಸಿಕೊಂಡಿದ್ದು, 286 ಕೋಟಿ ರೂ. ನೇರ ನಗದು ವರ್ಗಾವಣೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ನಿರುದ್ಯೋಗ ಭತ್ಯೆ ನೀಡುವುದರೊಂದಿಗೆ ಈ ಯುವಕರಿಗೆ ಇಂಡಸ್ಟ್ರಿ ಲಿಂಕೇಜ್ ಸೆಲ್ (Industry Linkage Cell) ಅಡಿ ಕೌಶಲ್ಯ ತರಬೇತಿ ನೀಡಲಾಗುವುದು. ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯನ್ನು (CMKKY) ಪ್ರಾರಂಭಿಸಲಾಗಿತ್ತು. ಪ್ರಸ್ತುತ, ರಾಜ್ಯದ ಯುವಕರ ಉದ್ಯೋಗಾರ್ಹತೆ ಮತ್ತು ಉದ್ಯಮಶೀಲತೆಯನ್ನು ಇನ್ನಷ್ಟು ಉತ್ತೇಜಿಸಲು ಯೋಜನೆಯ ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಸಿಎಂಕೆಕೆವೈ–2.0 (CMKKY 2.0) ಅನ್ನು ಜಾರಿಗೊಳಿಸಲಾಗುವುದು ಎಂದು ತಿಳಿಸಿದರು.

ವಿದ್ಯಾರ್ಥಿಗಳು ಭವಿಷ್ಯದಲ್ಲಿ ಸೂಕ್ತ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಮಾರ್ಗದರ್ಶನವನ್ನು ಒದಗಿಸಲು ನನ್ನ ವೃತ್ತಿ, ನನ್ನ ಆಯ್ಕೆ ಕಾರ್ಯಕ್ರಮದಡಿ ಸರ್ಕಾರಿ ಶಾಲಾ/ ಕಾಲೇಜುಗಳಲ್ಲಿನ 2.30 ಲಕ್ಷ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ನೀಡಲಾಗುವುದು ಎಂದು ಸಚಿವರು ವಿವರಿಸಿದರು.

ವಿಶ್ವ ಕೌಶಲ್ಯ ಸ್ಪರ್ಧೆಯ ಪೂರ್ವಸಿದ್ಧತೆಗಾಗಿ ಆಯೋಜಿಸಲಾಗುವ ರಾಷ್ಟ್ರೀಯ ಮಟ್ಟದ ಇಂಡಿಯಾ ಸ್ಕಿಲ್ 2026 (India Skills-2026) ಸ್ಪರ್ಧೆಯನ್ನು ಬೆಂಗಳೂರಿನಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ. ಅಳಿವಿನಂಚಿನಲ್ಲಿರುವ ಪಾರಂಪರಿಕ ಮತ್ತು ಪ್ರಾದೇಶಿಕ ಕೌಶಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸಲು 2,000 ಅಭ್ಯರ್ಥಿಗಳಿಗೆ ಅಗತ್ಯವಿರುವ ಟೂಲ್ ಕಿಟ್‌ಗಳೊಂದಿಗೆ ಅಲ್ಪಾವಧಿ ತರಬೇತಿಯನ್ನು ನೀಡಲಾಗುವುದು. ಲಂಬಾಣಿ ಜನಾಂಗದ ಕಸೂತಿ ಕಲೆಯ ಬಗ್ಗೆ ತರಬೇತಿಯನ್ನು 1,000 ಅಭ್ಯರ್ಥಿಗಳಿಗೆ ದಾವಣಗೆರೆ ಮತ್ತು ಬೀದರ್ ಜಿಲ್ಲೆಗಳಲ್ಲಿನ ಕೌಶಲ್ಯ ತರಬೇತಿ ಕೇಂದ್ರಗಳಲ್ಲಿ ನೀಡಲು ಕ್ರಮ ಕೈಗೊಳ್ಳಲಾಗಿದೆ. ಗೃಹಲಕ್ಷ್ಮಿ ಯೋಜನೆಯ ಯಜಮಾನಿಯರನ್ನು ಸ್ವಸಹಾಯ ಗುಂಪುಗಳ ಸದಸ್ಯರುಗಳನ್ನಾಗಿಸಿ ರಾಜ್ಯಮಟ್ಟದ ಅಕ್ಕ ಕೋ–ಆಪರೇಟಿವ್ ಸೊಸೈಟಿ ವ್ಯಾಪ್ತಿಗೆ ತರಲಾಗುವುದು. ರಾಷ್ಟ್ರೀಯ ಜೀವನೋಪಾಯ ಅಭಿಯಾನದಡಿ ಮಹಿಳಾ ಸ್ವ–ಸಹಾಯ ಸಂಘಗಳಿಂದ ಆಯ್ದ 50 ಸ್ಥಳಗಳಲ್ಲಿ ಶಿಶು ಪಾಲನೆಗಾಗಿ ವಾತ್ಸಲ್ಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಇಂದಿರಾ ಕ್ಯಾಂಟೀನ್‌ಗಳ ನಿರ್ವಹಣೆಯನ್ನು ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಸ್ವ–ಸಹಾಯ ಸಂಘಗಳ ಮಹಿಳೆಯರ ಮೂಲಕ ನಿರ್ವಹಿಸುವ ವ್ಯವಸ್ಥೆಯನ್ನು ಪ್ರಾಯೋಗಿಕವಾಗಿ 10 ನಗರ ಪ್ರದೇಶಗಳಲ್ಲಿ ಪ್ರಾರಂಭಿಸಲಾಗುವುದು ಎಂದು ಬಜೆಟ್‌ನಲ್ಲಿ ಘೋಷಿಸಲಾಗಿದೆ ಎಂದು ಸಚಿವರು ವಿವರಿಸಿದರು.


**ನಿಮ್ಮೂರ ಜಾತ್ರಾ ಮಹೋತ್ಸವಕ್ಕೆ ಸ್ವಾಗತ/ ಶುಭಾಶಯ ಕೋರುವ ಮೂಲಕ ನಿಮ್ಮೂರಿನ ಉತ್ಸವ ವೈಶಿಷ್ಟ್ಯವನ್ನು ಯುವಜನತೆಗೆ ತಿಳಿಸಲು ಬಯಸುತ್ತೀರಾ?**

**ಸಂಪರ್ಕಿಸಿ ಮೊ: 9448633038**


## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

### ಬೆಳಕಿನ ಹಾದಿ

ರಾಮಾಯಣ, ಮಹಾಭಾರತ, ಸಾಧು ಸಂತರು, ವಿಜ್ಞಾನಿ, ಹೀಗೆ ಪುಣ್ಯ ಪುರುಷರ ಜೀವನದಲ್ಲಿ ನಡೆದ ಘಟನೆಗಳು ಅಥವಾ ನೈತಿಕ ಕಥೆಗಳನ್ನು ಬರೆದು, ಕೊನೆಗೆ ಅಂತಹ ಕಥೆಯಿಂದ ನಮಗೆ ತಿಳಿಯುವ ಮೌಲ್ಯದ ಬಗ್ಗೆ 250 ಪದಗಳ ಮಿತಿಯಲ್ಲಿ ಬೆಳಕಿನ ಹಾದಿ ವಿಭಾಗಕ್ಕೆ ಬರೆದು ಕಳುಹಿಸಿ. ಸೂಕ್ತವಿದ್ದಲ್ಲಿ ಪ್ರಕಟಿಸುತ್ತೇವೆ. ಹೊಸ ಬರಹಗಾರರಿಗೆ ಅವಕಾಶ ಸಿದ್ಧವಾಗಿದೆ.

–: ಸಂಪಾದಕರು :–

**ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ–ಮೇಲ್:hampitimes@gmail.com
M: 94486 33038


## ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

– ಜಾಹೀರಾತು ವ್ಯವಸ್ಥಾಪಕರು.


# ವ್ಯಾಪ್ತಿ ಪ್ರದೇಶದ ಹೊರಗಿದ್ದಾರೆ

**ವೀಣಾ ಹೇಮಂತಗೌಡ ಪಾಟೀಲ್**

ಇನ್ನು ಎಲ್ಲ ರೀತಿಯ ಅನುಕೂಲಗಳಿರುವ ಮನೆಯಲ್ಲಿ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ಕಳುಹಿಸಲು ತಂದೆ ತಾಯಿ ಸಿದ್ದರಿರುವಾಗಲು ಕೂಡ ಆ ಮನೆಯ ಮಕ್ಕಳಿಗೆ ಓದಿನಲ್ಲಿ



ಆಸಕ್ತಿ ಕಡಿಮೆ ಇರುತ್ತದೆ ಇಲ್ಲವೇ ಹೆಚ್ಚಿನ ಓದನ್ನು ಓದಬೇಕೆಂದು ಅವರು ಅಪೇಕ್ಷಿಸುವುದಿಲ್ಲ... ಅನುಕೂಲ ಗಳಿದ್ದು ಕೂಡ ಓದುವ ಆಸಕ್ತಿ ಇಲ್ಲದೆ ಅವಕಾಶಗಳನ್ನು ಖುದ್ದು ಕಳೆದು ಕೊಳ್ಳುವುದು ಕೂಡ ವ್ಯಾಪ್ತಿ ಪ್ರದೇಶದಿಂದ ಹೊರಗಿದ್ದಂತೆಯೇ ಅಲ್ಲವೇ?

ಒಳ್ಳೆಯ ಓದು, ಉದ್ಯೋಗವನ್ನು ಹೊಂದಿರುವ ಹೆಣ್ಣು ಮಕ್ಕಳಿಗೆ ತಾವು ಕೆಲಸ ಮಾಡುತ್ತಿರುವ ಊರಿನಲ್ಲಿಯೇ ಮುಂದುವರೆಯುವ ಹಲವಾರು ಅವಕಾಶಗಳಿದ್ದಾಗಲೂ ಕೂಡ ಮದುವೆ ಅವರ ಎಷ್ಟೋ ಆಸೆ ಆಕಾಂಕ್ಷೆಗಳಿಗೆ ತಣ್ಣೀರೆರಚುತ್ತದೆ. ಆಗ ಅವರು ಬಯಸಿದ ಉದ್ಯೋಗ ಮತ್ತು ಜೀವನ ಶೈಲಿ ಅವರ ಪಾಲಿಗೆ ವ್ಯಾಪ್ತಿ ಪ್ರದೇಶದಿಂದ ಹೊರಗಿದೆ ಎಂದೇ ಅರ್ಥ.

ರೈತರ ಬದುಕಿನಲ್ಲಂತೂ ಆರ್ಥಿಕ ಅನುಕೂಲಗಳು ಸದಾ ವ್ಯಾಪ್ತಿ ಪ್ರದೇಶದ ಹೊರಗೆ ಇರುತ್ತವೆ. ಸಮಯಕ್ಕೆ ಸರಿಯಾಗಿ ಬೀಳದ ಮಳೆ, ಬಾರದ ಬೆಳೆ, ಎಲ್ಲದರ ನಡುವೆ ಬಂದಷ್ಟು ಬೆಳೆಯನ್ನು ಒಯ್ದು ಮಾರುಕಟ್ಟೆಗೆ ಹಾಕಿದರೆ ರೈತನಿಗೆ ಸಿಕ್ಕುವುದು ಹಿಡಿಯಷ್ಟು ದುಡ್ಡು.. ಅಷ್ಟು ಕಡಿಮೆ ದುಡ್ಡಿನಲ್ಲಿ ಸಂಸಾರದ ಖರ್ಚು ವೆಚ್ಚಗಳನ್ನು ತೂಗಿಸಿ ಮಕ್ಕಳ ಶೈಕ್ಷಣಿಕ ಅವಶ್ಯಕತೆಗಳನ್ನು ಪೂರೈಸುವಲ್ಲಿ ರೈತ ಸೋತು ಹೋಗುತ್ತಾನೆ. ಸರ್ಕಾರದ ವಿದ್ಯಾರ್ಥಿ ವೇತನಗಳು ಬರುತ್ತವೆ ನಿಜ, ಇದರಿಂದ ಅನುಕೂಲವಾಗುತ್ತದೆ ಎಂಬುದು ಕೂಡ ಅಷ್ಟೇ ಸತ್ಯ ಆದರೆ ಅಳಿದುಳಿದ ಖರ್ಚನ್ನು ಪೂರೈಸಲು ಕೂಡ ರೈತನಿಗೆ ಸಾಧ್ಯವಾಗದೆ ಆತನ ಮಕ್ಕಳಲ್ಲಿ ಭ್ರಮನಿರಸನ ಹುಟ್ಟಿ ಅವರು ಕೂಡ ಶಿಕ್ಷಣದ, ಅದರಲ್ಲೂ ಉನ್ನತ ಶಿಕ್ಷಣದ ವ್ಯಾಪ್ತಿಯಿಂದ ಹೊರಗೆ



ಉಳಿಯುತ್ತಾರೆ.

ಕುಟುಂಬದ ಯಜಮಾನನಾದ ತಂದೆ ಮನೆಯ, ಮಕ್ಕಳ ಎಲ್ಲಾ ಅವಶ್ಯಕತೆಗಳನ್ನು ಪೂರೈಸುವ ನಿಟ್ಟಿನಲ್ಲಿ ಸದಾ ಮನೆಯಿಂದ ಹೊರಗೆ ಇದ್ದು ಸಿಗುವ ವಾರಾಂತ್ಯಗಳಲ್ಲಿಯೂ ಕೂಡ ಸ್ನೇಹಿತರು ಮೋಜು ಮಜಾ ಎಂದು ಹೊರಗೆ ಇದ್ದರೆ ಆತ ಕುಟುಂಬದ ವ್ಯಾಪ್ತಿಯಿಂದ ಹೊರಗಿದ್ದಾನೆ ಎಂದೇ ಅರ್ಥ.

ಮಹಾನಗರಗಳಲ್ಲಿ ವಾಸವಾಗಿರುವ ಉದ್ಯೋಗಸ್ಥ ದಂಪತಿಗಳು ತಮ್ಮ ಕೆಲಸದ ಸ್ಥಳ ಮತ್ತು ಮನೆಯ ನಡುವಿನ ಓಡಾಟ, ಟ್ರಾಫಿಕ್ ಗಳಲ್ಲಿಯೇ ಕಳೆದು ಹೋಗಿದ್ದು, ಮಕ್ಕಳಿಗಾಗಿ, ಅವರ ಭವ್ಯ ಭವಿಷ್ಯಕ್ಕಾಗಿಯೇ ದುಡಿದರೂ ಕೂಡ ಮಕ್ಕಳಿಗೆ ಅಲಭ್ಯ ರಾಗುತ್ತಾರೆ. ಮನೆಯಲ್ಲಿ ಅಂತಹ ಮಕ್ಕಳನ್ನು ನೋಡಿಕೊಳ್ಳಲು ಕುಟುಂಬದ ಹಿರಿಯರು ಇದ್ದರೆ ಸರಿ, ಇಲ್ಲದೆ ಹೋದರೆ ಆ ಮಕ್ಕಳು ಎಲ್ಲ ರೀತಿಯ ಪ್ರೀತಿ ವಾತ್ಸಲ್ಯಗಳ ವ್ಯಾಪ್ತಿ ಪ್ರದೇಶದಿಂದ ಹೊರಗೆ ಇರುತ್ತಾರೆ.

ಇನ್ನು ಚುನಾವಣೆಗಳಲ್ಲಿ ಮತದಾರರ ಮನೆ ಮನೆಗಳಿಗೆ ಎಡತಾಕುವ ರಾಜಕೀಯ ನಾಯಕರು ಚುನಾವಣೆಯ ನಂತರ ಗೆದ್ದು ರಾಜ್ಯಸಭೆ ಮತ್ತು ಲೋಕಸಭೆಗಳಿಗೆ ಆಯ್ಕೆಯಾಗಿ ಹೋದರೆ ಮತ್ತೆ ಅವರು ಮತದಾರ ಬಂಧುಗಳ ಪಾಲಿಗೆ ವ್ಯಾಪ್ತಿ ಪ್ರದೇಶದಿಂದ ಹೊರಗಿದ್ದಾರೆ ಎಂದೇ ಅರ್ಥ. ಆಗಾಗ ಕಾರ್ಯಕ್ರಮಗಳಿಗೆ ಹಾಜರಾದರೂ ಕೂಡ ಪ್ರತಿಯೊಬ್ಬರ ಬಿನ್ನಹಗಳನ್ನು ಕೇಳಲು ಸಮಯದ ಅಭಾವ ತಲೆದೋರಿ ಅವರಿಬ್ಬರ ನಡುವೆ ಸಂಪರ್ಕ ಸಾಧ್ಯವಾಗುವುದಿಲ್ಲ.... ಒಂದು ರೀತಿಯಲ್ಲಿ ಶ್ರೀಸಾಮಾನ್ಯನ ವ್ಯಾಪ್ತಿ ಪ್ರದೇಶದಿಂದ ಅವರು ಹೊರಗೆ ಇರುತ್ತಾರೆ.

ಇನ್ನು ಸೋತವರು ಮತದಾರರು ತಮ್ಮನ್ನು ಸಂಪೂರ್ಣವಾಗಿ ಮರೆತುಬಿಟ್ಟಾರು ಎಂಬ ಅಳುಕಿನಿಂದ ಆಗಾಗ ಕ್ಷೇತ್ರದಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಹಾಜರಾಗಿ ಜನರನ್ನು ಭೇಟಿಯಾದರೂ ಈಗಾಗಲೇ ಸೋತಿರುವ ಅವರು ಮಾರುಕಟ್ಟೆಯಲ್ಲಿ ಚಲಾವಣೆಯಲ್ಲಿ ಇಲ್ಲದ ನಾಣ್ಯದಂತೆ ಮತದಾರರ ವ್ಯಾಪ್ತಿ ಪ್ರದೇಶದಿಂದ ಹೊರಗೆ ಇರುತ್ತಾರೆ.


ಇನ್ನು ಬರೆಯುವವರು ಸಾಕಷ್ಟು ಜನ ಇದ್ದಾರೆ ಆದರೆ ಪ್ರಕಟಣೆ ಅವರ ಪಾಲಿಗೆ ಅವರ ವ್ಯಾಪ್ತಿ ಪ್ರದೇಶದಿಂದ ಹೊರಗಿದ್ದಂತೆ. ಹಾಗೂ ಹೀಗೂ ಖರ್ಚು ಮಾಡಿ ಪುಸ್ತಕವನ್ನು ಪ್ರಕಟಿಸಿದ ಸಂತೋಷ ಅವರದಾಗುತ್ತಿದ್ದಂತೆಯೇ ಅವುಗಳ ಮಾರಾಟ ಒಂದು ಬೃಹದಾಕಾರದ ಪ್ರಶ್ನೆಯಾಗಿ ಕಾಡುತ್ತದೆ... ಪುಸ್ತಕಗಳನ್ನು ಖರೀದಿಸಿ ಓದುವ ಓದುಗರು ಬಹಳವೇ ಕಡಿಮೆಯಾಗಿ ಓದುಗರು ಲೇಖಕರ ವ್ಯಾಪ್ತಿ ಪ್ರದೇಶದಿಂದ ಸದಾ ಹೊರಗೆ ಇರುತ್ತಾರೆ.

ನಮಗೆ ಬೇಕಾದವರು ನಮಗೆ ಬೇಕಾದಾಗ ದೊರೆಯದೆ ಹೋದಾಗ ಅವರು ನಮ್ಮ ವ್ಯಾಪ್ತಿ ಪ್ರದೇಶದಿಂದ ಬಹಳಷ್ಟು ದೂರವಾಗಿದ್ದಾರೆ ಎಂಬ ಭಾವ ನಮ್ಮಲ್ಲಿ ಮೂಡುತ್ತದೆ. ಗೋಲಾಕಾರವಾಗಿರುವ ಈ ಭೂಮಿಯ ಯಾವುದೇ ಭಾಗದಲ್ಲಿಯೂ ನಮಗೆ ನಮ್ಮ ವ್ಯಾಪ್ತಿ ಪ್ರದೇಶದಿಂದ ಹೊರಗಾದವರು ಕಂಡೆ ಕಾಣುತ್ತಾರೆ.... ಆದರೆ ಗಗನ ಕುಸುಮದಂತೆ., ಮರುಭೂಮಿಯ ಮರೀಚಿಕೆಯಂತೆ, ದೂರದಲ್ಲಿ ಎಲ್ಲೋ ಭೂಮಿ ಬಾನು ಒಂದಾದಂತೆ. ನಿಮಗೂ ಇಂತಹ ನೂರೆಂಟು ಅನುಭವಗಳು ಆಗಿರಬಹುದಲ್ಲವೇ?

# ಅವಳ ಸ್ವಾತಂತ್ರ್ಯ

**– ಚೇತನ ಭಾರ್ಗವ, ಬೆಂಗಳೂರು**

ಯತ್ರ ನಾರ್ಯಸ್ತು ಪೂಜ್ಯನ್ತೇ ರಮನ್ತೇ ತತ್ರ ದೇವತಾಃ ।
ಯತ್ರೈತಾಸ್ತು ನ ಪೂಜ್ಯನ್ತೇ ಸರ್ವಾಸ್ತತ್ರಾಫಲಾಃ ಕ್ರಿಯಾಃ



ಅಂದರೆ ಎಲ್ಲಿ ಸ್ತ್ರೀಯರು ಗೌರವಿಸಲ್ಪಡುತ್ತಾರೋ ಅಲ್ಲಿ ದೇವತೆಗಳು ನೆಲೆಸಿರುತ್ತಾರೆ. ಸ್ತ್ರೀಯರನ್ನೆಲ್ಲಿ ಅವಮಾನಗೊಳಿಸಲಾಗುತ್ತದೋ ಅಲ್ಲಿ ಮಾಡಿದ ಕಾರ್ಯಗಳೆಲ್ಲವೂ ವ್ಯರ್ಥ ಎಂದು. ಈ ಮಾತು ಭಾರತೀಯ ಪರಂಪರೆಯಲ್ಲಿ ಹೆಣ್ಣೊಬ್ಬಳ ಸ್ಥಾನಮಾನವನ್ನು ಸೂಚಿಸುತ್ತದೆ. ಆದ್ದರಿಂದ ಹೆಣ್ಣಿಗೆ ಸಲ್ಲಬೇಕಾದ ಸ್ವಾತಂತ್ರ್ಯ ಮತ್ತು ಗೌರವಗಳನ್ನು ನೀಡಬೇಕು. ಈಗಿನ ಡಿಜಿಟಲ್ ಯುಗದಲ್ಲಿಯೂ ಕೂಡ ಹೆಣ್ಣಿನ ಮೇಲೆ ದೌರ್ಜನ್ಯ ನಡೆಯುತ್ತಿರುವುದು ಬಹಳ ವಿಷಾದನೀಯ.

ಗಂಡು ಮತ್ತು ಹೆಣ್ಣು ಸಮಾಜದ ಎರಡು ಕಣ್ಣುಗಳಿದ್ದಂತೆ. ಇವರಿಬ್ಬರೂ ಒಬ್ಬರಿಗೊಬ್ಬರು ಪೂರಕವಾಗಿರಬೇಕು ಆಗ ಸಮಾಜದಲ್ಲಿ ಶಾಂತಿ ನೆಲಸಲು ಸಾಧ್ಯವಾಗುತ್ತದೆ. ಗಂಡು ಮತ್ತು ಹೆಣ್ಣು ಇಬ್ಬರೂ ಇಲ್ಲಿ ಸಮಾನರು ಯಾರೂ ಹೆಚ್ಚಲ್ಲ ಕಡಿಮೆಯೂ ಅಲ್ಲ. ಸ್ತ್ರೀ ಸ್ವಾತಂತ್ರ್ಯವೆಂದರೆ ಪುರುಷ ಸಮುದಾಯದ ವಿರುದ್ಧ ಹೋರಾಟ ಮಾಡುವುದು ಎಂಬುದು ತಪ್ಪು ಕಲ್ಪನೆ.

ಹಿಂದೆ ಹೆಣ್ಣು ಮಕ್ಕಳು ನಾಲ್ಕು ಗೋಡೆಯ ಮಧ್ಯವೇ ಇರಬೇಕಿತ್ತು.ಅವರಿಗೆ ವಿದ್ಯಾಭ್ಯಾಸಕ್ಕಾಗಲಿ ಬೇರೆ ಯಾವುದೇ ಸಾಂಸ್ಕೃತಿಕ ಚಟುವಟಿಕೆಯ ಕಲಿಕೆಗಾಗಲಿ ಅವಕಾಶವಿರುತ್ತಿರಲಿಲ್ಲ. ಅವಳು ಮನೆಯಲ್ಲಿಯೇ ಬಂಧಿಯಾಗಿರಬೇಕಿತ್ತು.ಸಂಗೀತ ನೃತ್ಯದಲ್ಲಿ ಆಸಕ್ತಿ ಇದ್ದರೂ ಜನ್ಮಜಾತವಾಗಿ ಆ ಕಲೆ ಸಿದ್ಧಿಸಿದ್ದರೂ ಅದರಲ್ಲಿ ಪರಿಣಿತಿ ಹೊಂದಲು ಸಾಧ್ಯವಾಗುತ್ತಿರಲಿಲ್ಲ. ಅವಳು ಮನೆಗೆ ಮಾತ್ರ ಸೀಮಿತವಾಗಿದ್ದಳು.ಗಂಡ ಮಕ್ಕಳು ಮನೆಗೆ ಬಂದ ಅತಿಥಿಗಳ ಸತ್ಕಾರ, ಇಷ್ಟೇ ಅವಳ ಪ್ರಪಂಚವಾಗಿರುತ್ತಿತ್ತು. ಆಕೆ ಮನೆಯಲ್ಲಿ ಗುಲಾಮರ ರೀತಿಯಲ್ಲಿ ಕೆಲಸ ಮಾಡುತ್ತಾ ಇರಬೇಕಿತ್ತು.ಅವಳಿಲ್ಲದಿದ್ದರೆ ಮನೆಯಲ್ಲಿ ಯಾವ ಕೆಲಸವೂ ಆಗುತ್ತಿರಲಿಲ್ಲ. ಆದರೆ ಅವಳಿಗೆ ಸಿಗಬೇಕಾದ ಸ್ಥಾನಮಾನ, ಗೌರವ ಮಾತ್ರ ಸಿಗುತ್ತಿರಲಿಲ್ಲ. ಮನೆಯಿಂದ ಹೊರಗೆ ಹೋಗಬೇಕಾದರೂ ಪತಿಯ ಅಥವಾ ಮನೆಯ ಹಿರಿಯವರ ಒಪ್ಪಿಗೆ ಬೇಕಾಗಿರುತ್ತಿತ್ತು. ಹೆಣ್ಣು ಮಕ್ಕಳಿಗೆ ಸೈಕಲ್ ಹೊಡೆಯುವ ಸ್ವತಂತ್ರವೂ ಇರುತ್ತಿರಲಿಲ್ಲ.ಒಂದು ವೇಳೆ ಹುಡುಗಿಯೊಬ್ಬಳು ಸೈಕಲ್ ಕಲಿತು ಹೊಡೆಯಲು ಆರಂಭಿಸಿದರೆ ಅವಳಿಗೆ ನೋಡಿದವರೆಲ್ಲಾ ಬಜಾರಿಯೆಂಬ ಹಣೆಪಟ್ಟಿ ಕಟ್ಟಿ ಅಪಹಾಸ್ಯ ಮಾಡಿ ಅವಳನ್ನು ಗದರುತ್ತಿದ್ದರು. ಅವಳಿಗೆ ತನ್ನ ಬಾಳಸಂಗಾತಿಯನ್ನು ಆಯ್ಕೆ ಮಾಡುವ ಸ್ವತಂತ್ರವೂ ಇರಲಿಲ್ಲ. ಅವಳು ಹೊಂದಾಣಿಕೆ ಎಂಬ ಸೂತ್ರವನ್ನು ಜೀವನದಲ್ಲಿ ಅಳವಡಿಸಿಕೊಂಡು ಸಾಯುವವರೆಗೂ ಕುಂಟ ಅಥವಾ ಕುರುಡನಾದರೂ ಅವನೊಂದಿಗೆ ಬಾಳಬೇಕಾಗಿತ್ತು. ಹೆಣ್ಣು ಧ್ವನಿ ಏರಿಸಿ ಮಾತನಾಡುವ ಹಾಗೂ ಇರಲಿಲ್ಲ

ಆದರೆ ಈಗ ಕಾಲ ಬದಲಾಗಿದೆ. ಅವಳು ನಾಲ್ಕು ಗೋಡೆಯ ಮಧ್ಯೆಯೇ ಬಂಧಿ ಆಗಿರುವ ಪರಿಸ್ಥಿತಿ ಈಗ ಇಲ್ಲ. ಆಕೆ ಇಚ್ಚಿಸುವಷ್ಟು ವಿದ್ಯಾಭ್ಯಾಸವನ್ನು ಮಾಡಬಹುದು.ಅದು ಅವಳ ಮೂಲಭೂತ ಹಕ್ಕು ಕೂಡ ಹೌದು.ಇಂದಿನ ಮಹಿಳೆಯರು ಮನೆ ಮತ್ತು ಮನೆಯ ಹೊರಗೂ ದುಡಿಯುತ್ತಾರೆ.ಪುರುಷರಿಗೆ ಸಮನಾಗಿ ಕೆಲವು ವೇಳೆ ಅವರಿಗಿಂತ ಒಂದು ಕೈ ಮೇಲೆಯೇ ಜವಾಬ್ದಾರಿಯನ್ನು ತೆಗೆದುಕೊಂಡು ನಿಭಾಯಿಸುತ್ತಿದ್ದಾರೆ.ಆಕೆ ಸೈಕಲ್ ನಿಂದ ಹಿಡಿದು ವಿಮಾನವನ್ನು ಚಲಾಯಿಸುವಷ್ಟು ಶಕ್ತಳಾಗಿದ್ದಾಳೆ. ಆದರೂ ಹೆಣ್ಣು ಅಂದರೆ ಒಂದು ತೆರನಾದ



ಅಸಡ್ಡೆ ಮಾತ್ರ ಕಡಿಮೆಯಾಗಿಲ್ಲ.ಅವಳಿಗೆ ಸಿಗಬೇಕಾದ ಸ್ವಾತಂತ್ರವು ಸಿಗುತ್ತಿಲ್ಲ.

ಹೆಣ್ಣು ಎಷ್ಟು ಚೆನ್ನಾಗಿ ಓದಿಕೊಂಡಿದ್ದರೂ ಸಹ ಅವಳು ಉದ್ಯೋಗಕ್ಕೆ ಹೋಗುವುದೋ ಬೇಡವೋ ಎಂಬ ನಿರ್ಧಾರ ಬಹಳ ಸಲ ಆಕೆಯ ಪತಿಯ ಹಾಗೂ ಮನೆಯವರ ಮೇಲೆ ಅವಲಂಬಿತವಾಗಿರುತ್ತದೆ. ತನ್ನ ಆಸೆ ಆಕಾಂಕ್ಷೆಗಳನ್ನು ಬದಿಗಿಟ್ಟು ತನ್ನ ಪರಿವಾರದ ಹಿತದೃಷ್ಟಿಯಿಂದ ಮನೆಯಲ್ಲಿಯೇ ಗೃಹಿಣಿಯಾಗಿದ್ದರೆ ಹೊರಗಡೆ ದುಡಿಯುವವರ ಕಷ್ಟ ನಿನಗೇನು ಗೊತ್ತು ಎಂಬ ಧೋರಣೆ ಕಮ್ಮಿ ಆಗಿಲ್ಲ. ಈಕೆ ಬೆಳಗ್ಗೆಯಿಂದ ರಾತ್ರಿಯವರೆಗೆ ದುಡಿದರೂ ಅದು ಗಣನೆಗೆ ಬರುವುದಿಲ್ಲ.ಆಕೆಯ ಮನಸ್ಸಿಗೆ ಹಾಗೂ ಭಾವನೆಗಳಿಗೆ ಇಂದಿಗೂ ಸರಿಯಾದ ಬೆಲೆ ಸಿಕ್ಕುತ್ತಿಲ್ಲ.

ಹೆಣ್ಣನ್ನು ಶಕ್ತಿ,ಜನನಿ,ಮೂಲ ಸ್ವರೂಪಿಣಿ ಹೀಗೆ ಬಗೆ ಬಗೆಯಾಗಿ ವರ್ಣಿಸಿದರೂ ಹೆಣ್ಣು ಮಗುವೊಂದು ಜನಿಸಿದಾಗ ಅಯ್ಯೋ ಹೆಣ್ಣು ಮಗುವಾ ಎಂಬ ರಾಗವನ್ನು ಎಳೆಯುವುದು ಮಾತ್ರ ನಮ್ಮ ಸಮಾಜ ಬಿಟ್ಟಿಲ್ಲ. ಇನ್ನೂ ಹೆಣ್ಣು ಮಕ್ಕಳಿಗೆ ಸ್ವತಂತ್ರವನ್ನು ಕೊಟ್ಟಾಗ ಅವರು ಅದನ್ನು ದುರುಪಯೋಗ ಮಾಡಿಕೊಂಡರೆ ಅದು ಅವರ ತಂಗಿಯಂದಿರು ಹಾಗೂ ಅವರಿಗಿಂತ ವಯಸ್ಸಿನಲ್ಲಿ ಕಡಿಮೆ ಇರುವ ಹೆಣ್ಣು ಮಕ್ಕಳ ಮೇಲೆ ದುಷ್ಪರಿಣಾಮ ಬೀರುತ್ತದೆ. ಕಾಲ ಬದಲಾದರೆ ಪ್ರಯೋಜನವಿಲ್ಲ,ಜನರ ಸಮಾಜದ ನೋಡುವ ದೃಷ್ಟಿ ಪರಿಕಲ್ಪನೆ ಬದಲಾಗಬೇಕು.

ಭ್ರೂಣ ಹತ್ಯೆ,ದೇವದಾಸಿ ಪದ್ಧತಿ,ವೇಶ್ಯಾವಾಟಿಕೆ, ಬಾಲ್ಯವಿವಾಹ,ಬಾಲಕಾರ್ಮಿಕ ಪದ್ಧತಿ,ಲೈಂಗಿಕ ಶೋಷಣೆ, ಇನ್ನಿತರ ಮಹಿಳೆಯರ ಮೇಲೆ ಆಗುವ ದೌರ್ಜನ್ಯ ಗಳಿಂದ ಮುಕ್ತಗೊಳಿಸಿ ಸರಿಯಾದ ರೀತಿಯ ಶಿಕ್ಷಣ ಮಹಿಳೆಯರಿಗೆ ದೊರಕುವಂತಾದರೆ ಸ್ತ್ರೀ ಸ್ವಾತಂತ್ರ್ಯಕ್ಕೆ ನಿಜವಾದ ನ್ಯಾಯ ದಕ್ಕಂತೆ ಆಗುತ್ತದೆ.ಮಹಿಳೆಯರು ಯಾವುದೇ ಆತಂಕವಿಲ್ಲದೆ ನಿರ್ಭಯವಾಗಿ ನಡುರಾತ್ರಿಯಲ್ಲಿ ಒಡಾಡುವಂತಾಗಬೇಕು.

ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂಬ ನಾಣ್ಣುಡಿಯಂತೆ ಪ್ರತಿಯೊಬ್ಬ ಸ್ತ್ರೀಯು ಶಿಕ್ಷಿತರಾಗಬೇಕು. ಆಗ ಮಾತ್ರ ದೇಶ ಪ್ರಗತಿ ಹೊಂದಲು ಸಾಧ್ಯ.ಮಹಿಳೆಯರು ತಮ್ಮ ನಿರ್ಧಾರ,ಬೇಕು ಬೇಡಗಳನ್ನು ತಾವೇ ಸ್ವತಂತ್ರವಾಗಿ ತೆಗೆದುಕೊಳ್ಳುವ ದೃಢತೆಯನ್ನು ಮೈಗೂಡಿಸಿಕೊಳ್ಳಬೇಕು.

ಸ್ವಾತಂತ್ರ್ಯದ ಹೆಸರಿನಲ್ಲಿ ಸ್ವೇಚ್ಛಾಚಾರ ವಾಗಬಾರದು. ಉದಾಹರಣೆಗೆ ಮಹಿಳೆಯರು ಅರೆಬರೆ ಉಡುಗೆ ತೊಟ್ಟು ಅಪರಾತ್ರಿಯಲ್ಲಿ ಪಬ್ಬು ಬಾರುಗಳಲ್ಲಿ ಕಾಣಿಸಿಕೊಳ್ಳುವುದನ್ನು ಸ್ವಾತಂತ್ರ್ಯವೆಂದು ಪರಿಗಣಿಸಲು ಸಾಧ್ಯವಿಲ್ಲ.

ಸ್ತ್ರೀಯು ಶಿಕ್ಷಿತಳಾಗಿ, ಸಾಮಾಜಿಕ, ಆರ್ಥಿಕ, ರಾಜಕೀಯ ವಿಷಯಗಳಲ್ಲಿ ಸಲಹೆ ನೀಡುವ, ದೌರ್ಜನ್ಯದ ವಿರುದ್ಧ ಧ್ವನಿ ಎತ್ತುವ ಮುಕ್ತವಾತಾವರಣ,ಅಭಿವ್ಯಕ್ತಿ ಸ್ವಾತಂತ್ರ್ಯವು ಮಹಿಳೆಯರದ್ದಾಗಬೇಕು. ಆಗ ಸ್ತ್ರೀ ಯರಿಗೆ ಸ್ವಾತಂತ್ರ್ಯ ದೊರೆತಂತೆ ಆಗುತ್ತದೆ.

# ಅವಳೆಂದರೆ

**– ಮಮತಾ ಶೃಂಗೇರಿ**

ಅವಳೆಂದರೆ ಸೃಷ್ಟಿ. ಅವಳೆಂದರೆ ಭೂಮಿ. ಅವಳೆಂದರೆ ಹಸಿರು,ಹೂವು, ಹಣ್ಣು, ಅವಳೆಂದರೆ ಸಕಲವನ್ನು ಹೊತ್ತ ಧರಿತ್ರಿ, ದೇವತೆ. ಅವಳಿಗಿಂತ ಮಿಗಿಲಾದವರು ಯಾರಿಲ್ಲ. ಅವಳನ್ನು ತುಳಿದವರ್ಯಾರೂ ಉಳಿಯುವುದಿಲ್ಲ. ಅವಳಿಗೆ ಬೆಲೆಕೊಟ್ಟು ಗೌರವದಿಂದ ನಡೆಸಿಕೊಂಡರೆ



ಹೆಚ್ಚಾಗುವುದು ಪ್ರತಿಯೊಬ್ಬರ ಗೌರವ, ಹಾಗೂ ವ್ಯಕ್ತಿತ್ವದ ಹೊಳಪು. ಇಂತಹ ಅವಳನ್ನು ತಮ್ಮ ತಾಳಕ್ಕೆ ಕುಣಿಸಿದರೆ, ಕಾಲ ಕಸವಾಗಿ ಕಂಡರೆ, ಅವಳನ್ನು ತಮ್ಮ ಕಾಮನೆಗಳನ್ನಷ್ಟೇ ಪೂರೈಸಿಕೊಳ್ಳಲು ಬಳಸಿಕೊಂಡರೆ ಅಂತಹವರು ಅಧಮರು ಎನ್ನಿಸಿ ಕೊಳ್ಳುವರು.

ಅದಕ್ಕಾಗಿಯೇ ಮನು ಸ್ಮೃತಿಯಲ್ಲಿ "ಯತ್ರ ನಾರ್ಯಸ್ತು ಪೂಜ್ಯಂತೆ, ರಮಂತೆ ತತ್ರ ದೇವತಃ" ಎಂದು ಉಲ್ಲೇಖಿಸಲಾಗಿದೆ. ಎಲ್ಲಿ ಸ್ತ್ರೀಯರನ್ನು ಪೂಜಿಸುತ್ತಾರೋ ಅಲ್ಲಿ ಸಕಲ ದೇವತೆಗಳು ನೆಲೆಸಿರುತ್ತಾರೆ, ಎಂದು ಸನಾತನ ಧರ್ಮ ಶಾಸ್ತ್ರಗಳು ಉಲ್ಲೇಖಿಸುತ್ತದೆ.



ಸ್ತ್ರೀಯರನ್ನು ಗೌರವಿಸದ ಯಾವ ವ್ಯಕ್ತಿಯೂ ಕೂಡ ಗೌರವಾರ್ಹರಾಗಿ ಉಳಿಯುವುದಿಲ್ಲ. ಒಂದೊಮ್ಮೆ ಕೆಟ್ಟ ಸ್ತ್ರೀ ಆಗಿದ್ದರೂ, ಆಕೆಯ ಬಾಹ್ಯ ವ್ಯಕ್ತಿತ್ವಕ್ಕೆ, ಆಕೆಯ ನಡವಳಿಕೆಗೆ ಗೌರವ ಕೊಡದೆ ಹೋದರೂ, ಆಕೆಯ ಹೆಣ್ತನಕ್ಕೆ ಗೌರವ ಕೊಡಬೇಕಾದದ್ದು ಪ್ರತಿಯೊಬ್ಬರ ಕರ್ತವ್ಯವಾಗಿರುತ್ತದೆ. ಏಕೆಂದರೆ ಪ್ರತಿಯೊಂದು ಜೀವಿಯ ತಾಯಿ ಹೆಣ್ಣು. ಅದೇ ತಾಯಿಯ ಪ್ರತಿರೂಪ ಪ್ರತಿ ಹೆಣ್ಣು ಜೀವಿಯು ಹೌದು. ಹಾಗಾಗಿ ಎಂತಹ ಸ್ಥಿತಿಯಲ್ಲಿಯೂ ಕೂಡ ಆಕೆಗೆ ಮಾನಹಾನಿಯಾಗುವಂತಹ, ಆಕೆಯ ಗೌರವಕ್ಕೆ ಧಕ್ಕೆ ಬರುವಂತಹ, ಕೆಲಸವನ್ನು ಯಾರೂ ಕೂಡ ಎಸೆಗಬಾರದು.

ಹೆಣ್ಣು ತಪ್ಪು ಮಾಡಿದಾಗ ಆಕೆಯ ತಪ್ಪುಗಳಿಗೆ ನಡವಳಿಕೆಗೆ ಶಿಕ್ಷೆಯಾಗಬೇಕೇ ಹೊರತು, ಆಕೆಯ ಹೆಣ್ತನವನ್ನು ಬೆರಳು ಮಾಡಿ ತೋರಿಸುವುದು, ಹೆಣ್ಣೆಂಬ ಕಾರಣಕ್ಕೆ ತುಚ್ಛವಾಗಿ ನೋಡುವುದು, ಎಂದಿಗೂ ಯಾರಿಗೂ ಶೋಭೆ ತರುವಂತಹ ಕೆಲಸವಲ್ಲ. ಅದು ಸಮಾಜಕ್ಕೆ ಮಾರಕವಾಗಿ ಪರಿಣಮಿಸುತ್ತದೆ. "ಸ್ತ್ರೀ ಒಲಿದರೆ ನಾರಿ, ಮುನಿದರೆ ಮಾರಿ" ಎನ್ನುವ ಗಾದೆ ಮಾತಿನಂತೆ, ಸ್ತ್ರೀಯರನ್ನು ಪ್ರೀತಿಯಿಂದ ಗೌರವದಿಂದ ಗೆಲ್ಲಬೇಕೆ ಹೊರತು,ಅಧಿಕಾರದಿಂದ,ಅಪಹಾಸ್ಯದಿಂದ,ಕೀಳುಮನೋಭಾವನೆಯಿಂದ ಗೆಲ್ಲಲು ಹೋದರೆ ಅದರ ಪರಿಣಾಮ ಯಾವಾಗಲೂ ಬಹಳ ಘೋರವಾಗಿರುತ್ತದೆ.

ಇದು ಹೆಣ್ಣಿಗಾದರೂ ಅಷ್ಟೇ, ಹೆಣ್ಣಿನ ಪ್ರತಿರೂಪವಾದ ಪ್ರಕೃತಿಗಾದರೂ ಅಷ್ಟೇ. "ಆಕೆ ಎಲ್ಲವನ್ನು ಒಂದು ಮಿತಿಯವರೆಗಷ್ಟೇ ಸಹಿಸಿಕೊಳ್ಳಬಲ್ಲಳು. ಆಕೆ ಮಹಿಳೆಯಾದರೂ, ಇಳೆಯಾದರೂ.. ಕಾಪಾಡುವವಳು ಅವಳೇ, ನಾಶ ಮಾಡುವವಳು ಅವಳೇ" ಹಾಗಾಗಿ ಪ್ರತಿ ಹೆಣ್ಣನ್ನು ಗೌರವ ಭಾವದಿಂದ ಕಾಣುವಂತಗಲಿ ಎಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಈ ಸಂಧರ್ಭದಲ್ಲಿ ಆಶಿಸೋಣ.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No. 15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055

# ದೇವದಾಸಿ ಪದ್ಧತಿ ನಿರ್ಮೂಲನೆಗೆ ಶಿಕ್ಷಣ ಅಗತ್ಯ : ನ್ಯಾ. ಮಾಹಂತೇಶ

**ಹಂಪಿ ಟೈಮ್ಸ್ ಕೊಪ್ಪಳ**

ದೇವದಾಸಿ ಪದ್ಧತಿ ಎಂಬ ಅನಿಷ್ಟ ಪದ್ಧತಿಯನ್ನು ನಿರ್ಮೂಲನೆಯಾಗಲು ಶಿಕ್ಷಣ ಎಂಬುದು ಬಹಳ ಅತ್ಯಂತ ದೊಡ್ಡ ಅಸ್ತ್ರ. ನಿಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿದಾಗ ಈ ದೇವದಾಸಿ ಪದ್ಧತಿಯನ್ನು ಬುಡಸಮೇತ ಕಿತ್ತು ಹಾಕಲು ಸಾಧ್ಯವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾತೇಶ ಸಂಗಪ್ಪ ದರಗದ ಅವರು ಸಲಹೆ ನೀಡಿದರು.

ಜಿಲ್ಲಾ ಕಾನೂನು ಸೇವಗಳ ಪ್ರಾಧಿಕಾರ, ಕೊಪ್ಪಳ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ, ದೇವದಾಸಿ ಪುನರ್ವಸತಿ ಯೋಜನೆ, ಕೊಪ್ಪಳ ಮತ್ತು ಗ್ರಾಮ ಪಂಚಾಯಿತಿ ಕವಲೂರು ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಕವಲೂರು ಗ್ರಾಮದ ಡಾ.ಬಿ.ಆರ್. ಅಂಬೇಡ್ಕರ್ ಸಮುದಾಯ ಭವನದಲ್ಲಿ ಮಾಜಿ ದೇವದಾಸಿ ಮಹಿಳೆಯರಿಗೆ ಏರ್ಪಡಿಸಿದ್ದ ಉಚಿತ ಕಾನೂನು ಶಿಬಿರ ಕಾರ್ಯಕ್ರಮಉದ್ಘಾಟಿಸಿಮಾತನಾಡಿದರು.

ದೇವದಾಸಿ ಮಹಿಳೆಯರು ಸಂಕಟವನ್ನು ಮುಚ್ಚಿಟ್ಟುಕೊಂಡು ಎಷ್ಟೇ ನೋವುಗಳಿದ್ದರೂ ಸಹಿತ ಖುಷಿಯಾಗಿ ಇರುತ್ತೀರಿ. ನಿಮಗೆ ಮುಖ್ಯವಾಗಿ ಬೇಕಿರುವುದು ಮಾನಸಿಕ ನೆಮ್ಮದಿ, ಸಮಾಜದಲ್ಲಿ ಗೌರವ. ಮುಂದಿನ ಪೀಳಿಗೆಯವರು ಈ ಪದ್ಧತಿಗೆ ಬಲಿಯಾಗದಿರಲು ಎಲ್ಲರಿಗೂ ಶಿಕ್ಷಣ ದೊರೆಯಬೇಕು. ಯಾರಾದರೂ ದೇವದಾಸಿ ಪದ್ಧತಿಗೆ ಬಿಟ್ಟಿದ್ದೆಯಾದರೆ ಕಾನೂನಿನಡಿ ಶಿಕ್ಷೆ ವಿಧಿಸಲಾಗುವುದು ಎಂದು ಹೇಳಿದರು.

ರವಿಚಂದ್ರ ಮಾಟಲದಿನ್ನಿ ಅವರು ದೇವದಾಸಿ ಸಮರ್ಪಣೆ ನಿಷೇಧ ಕಾಯ್ದೆ–1982 ಮತ್ತು ತಿದ್ದುಪಡಿ ಅಧಿನಿಯಮ–2009 ರ ಕುರಿತು ಉಪನ್ಯಾಸ ನೀಡಿದರು.

ಕೊಪ್ಪಳ ದೇವದಾಸಿ ಪುನರ್ವಸತಿ ಯೋಜನಾಧಿಕಾರಿ ಪೂರ್ಣಿಮಾ ಯೋಳಭಾವಿ ಅವರು ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರೆ, ಸಖಿ ಒನ್ ಸ್ಟಾಪ್ ಸೆಂಟರ್ ಆಡಳಿತಾಧಿಕಾರಿ ಯಮುನಾ ಬೆಸ್ತರ್ ಮಾತನಾಡಿದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಲ್ಲಮ್ಮ ಬಾಳಪ್ಪ ಬಿಸರಹಳ್ಳಿ ಅಧ್ಯಕ್ಷತೆವಹಿಸಿದ್ದರು. ಪಿಡಿಓ ಅನಿತಾ ಕಿಲ್ಲೇದ, ಯೋಜನಾ ಅನುಷ್ಠಾಧಿಕಾರಿ ರೇಣುಕಾ ಮಠದ, ಸ್ನೇಹಾ ಸಂಸ್ಥೆಯ ಶೋಭಾ ಮಠದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಉದ್ಯೋಗಕಾಂಕ್ಷಿಗಳಲ್ಲಿ ಇರಲಿ ನಿರಂತರ ಪ್ರಯತ್ನ

**ಮೊದಲ ಪುಟದಿಂದ**

ಉದ್ಯಮ ಸ್ಥಾಪನೆಗೂ ಅಡಿಪಾಯ ಹಾಕಬೇಕು. ಈ ಮೂಲಕ ಇತರರಿಗೂ ಉದ್ಯೋಗ ನೀಡುವಂತವರಾಗಬೇಕು ಎಂದು ಆಶಿಸಿದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಮಾತನಾಡಿ, ಬದುಕಿನಲ್ಲಿ ಉತ್ತಮ ಸಾಧಕರಾಗಲು ಕಠಿಣ ಪರಿಶ್ರಮ, ಸಂವಹನ ಕಲೆ, ಭಾಷೆಯ ಮೇಲೆ ಉತ್ತಮ ಹಿಡಿತ ಸಾಧಿಸುವ ಗುಣ ಮೈಗೂಡಿಸಿಕೊಳ್ಳುವುದು ಅವಶ್ಯಕ ಎಂದು ಕರೆ ನೀಡಿದರು.

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಸ್ಕಿಲ್ ಕನೆಕ್ಟ್ ಕುರಿತ ವ್ಯಾಪಕ ಪ್ರಚಾರ ಕೈಗೊಂಡು, ಅರಿವು ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಾಣೇಶ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ನಿರುದ್ಯೋಗಿ ಯುವಕ ಯುವತಿಯರಿಗೆ ಕೌಶಲ್ಯಾಧಾರಿತ ತರಬೇತಿ ನೀಡಿ ಉದ್ಯೋಗ ಮೇಳಗಳ ಆಯೋಜಿಸುವ ಮೂಲಕ ಉದ್ಯೋಗ ಪಡೆಯಲು ಅವಕಾಶ ಕಲ್ಪಿಸಿಕೊಡುವುದು ಇಲಾಖೆಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಪ್ರತಿ ಉದ್ಯೋಗ ಮೇಳದಲ್ಲಿ ನಿರುದ್ಯೋಗ ಯುವಕ ಮತ್ತು ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಉದ್ಯೋಗ ಮೇಳದ ಸದುಪಯೋಗಪಡೆದುಕೊಳ್ಳಬೇಕು ಎಂದರು.

ಉದ್ಯೋಗ ಮೇಳದಲ್ಲಿ ಒಟ್ಟು 48 ಕಂಪನಿಗಳು ಭಾಗವಹಿಸಿದ್ದವು. ಮೇಳದಲ್ಲಿ ಒಟ್ಟು 2,749 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. ಅದರಲ್ಲಿ 1,146 ಉದ್ಯೋಗಾಕಾಂಕ್ಷಿಗಳು ಭಾಗವಹಿಸಿದ್ದು, 281 ಅಭ್ಯರ್ಥಿಗಳು ಆಯ್ಕೆಗೊಂಡಿದ್ದಾರೆ.551ಅಭ್ಯರ್ಥಿಗಳನ್ನು ಕಾಯ್ದಿರಿಸಲಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಜಿಪಂ ಯೋಜನಾ ನಿರ್ದೇಶಕವಿನೋದ್,ಎನ್‌ಆರ್‌ಎಲ್‌ಎಂನ ಡಿಪಿಎಂ ರಾಜೇಂದ್ರ, ಸಸಅ ಕಾಲೇಜಿನ ಪ್ರಾಚಾರ್ಯರಾದ ಡಾ.ಪ್ರಹ್ಲಾದ ಚೌದರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕ ವಿಶ್ವನಾಥ್, ಸಹಾಯಕ ಸಾಂಖ್ಯಿಕ ಅಧಿಕಾರಿ ಚಂದ್ರಮ್ಮ, ಜಿಲ್ಲಾ ಅಭಿಯಾನ ವ್ಯವಸ್ಥಾಪಕ ಪ್ರಾಣೇಶ್.ವಿ ಸೇರಿದಂತೆ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು, ಇನ್ನಿತರರು ಉಪಸ್ಥಿತರಿದ್ದರು.



ಕೊಟ್ಟೂರು ಪಟ್ಟಣದಲ್ಲಿ ಕೊಟ್ಟೂರೇಶ್ವರ ಜಾತ್ರೆಯಂಗವಾಗಿ ಶ್ರೀ ಕುಮಾರ ವಿಜಯ ನಾಟ್ಯ ಸಂಘ ಚಿತ್ತರಗಿ. ಇವರ "ಛೀ ಕಳ್ಳಿ ಬಾ ಹೊಳ್ಳಿ" ನಾಟಕದ ಕಲಾವಿದ ದಯಾನಂದ ಬೀಳಗಿ ಅವರ ಅಭಿನಯ ಮೆಚ್ಚಿ ಅವರನ್ನು ಮತ್ತು ನಾಟಕದ ಯಜಮಾನ ಮಂಜುನಾಥರನ್ನು ಕಲಾ ಪ್ರೇಮಿಗಳು ಕೊಟ್ಟೂರೇಶ್ವರ ಕಾಲೇಜ್ ಹಳೆಯ ವಿದ್ಯಾರ್ಥಿಗಳು ಸನ್ಮಾಸಿ ಪ್ರೋತ್ಸಾಹಿಸಿದರು.



ಕೂಡ್ಲಿಗಿ ತಾಲೂಕು ದೈಹಿಕ ಶಿಕ್ಷಣ ಶಿಕ್ಷಕರ ಗ್ರೇಡ್–1 ಸಂಘಕ್ಕೆ ಸರಕಾರಿ ಪ್ರೌಢಶಾಲೆ ಸೂಲದಹಳ್ಳಿಯ ಹಿರಿಯ ದೈಹಿಕ ಶಿಕ್ಷಕರಾದ ಖಲೀಲ್ ಸಾಹೇಬ್.ಟಿ. ಅವರು ಖಜಾಂಚಿಯಾಗಿ ಆಯ್ಕೆಯಾಗಿದ್ದರಿಂದ ಸೂಲದಹಳ್ಳಿ ಶಾಲೆಯಲ್ಲಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯ ಗುರುಗಳಾದ ಬೋರಯ್ಯ .ಡಿ. ಶಿಕ್ಷಕರುಗಳಾದ ವಿಶ್ವನಾಥ.ಕೆ. ವಿಶ್ವನಾಥ .ಕೆ.ಎಚ್.ಎಮ್. ರೇವಣಾರಾಧ್ಯ. ಜೆ.ಎಂ. ಮಧು.ಕೆ. ಹರೀಶ ಗೌಡ .ಬಿ. ಷಡಕ್ಷರಿಗೌಡ .ರವಿ.ಎನ್. ಬಸವರಾಜ ಜಿ. ಸಿದ್ದೇಶ್.ರಾಕೇಶ್. ಸಂತೋಷ್. ವಿಜಯಲಕ್ಷ್ಮಿ ಉಪಸ್ಥಿತರಿದ್ದರು.

# ದೇವದಾಸಿ ಮಹಿಳೆಯರು ಆರೋಗ್ಯ ಕಾಪಾಡಿಕೊಳ್ಳಿ

**ಹಂಪಿ ಟೈಮ್ಸ್ ಕೊಪ್ಪಳ**

ದೇವದಾಸಿ ಮಹಿಳೆಯರು ಬಹುತೇಕರು ವಯಸ್ಸಾದವರು ಇರುತ್ತೀರಿ. ವಯೋಸಹಜ ಕಾಯಿಲೆಗಳು ಬಂದರೆ ತಕ್ಷಣವೇ ಸರ್ಕಾರಿ ಆಸ್ಪತ್ರೆಗೆ ಬಂದು ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ವೈದ್ಯಾಧಿಕಾರಿ ಡಾ.ಅಂಜುಂ ತಾಜ್ ಅವರು ಸಲಹೆ ನೀಡಿದರು. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಬೆಂಗಳೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ, ದೇವದಾಸಿ ಪುನರ್ವಸತಿ ಯೋಜನೆ, ಕೊಪ್ಪಳ ಮತ್ತು ಸಮುದಾಯ ಆರೋಗ್ಯ ಕೇಂದ್ರ, ವೆಂಕಟಗಿರಿ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ ವೆಂಕಟಗಿರಿಯಲ್ಲಿ ಮಾಜಿ ದೇವದಾಸಿ ಮಹಿಳೆಯರಿಗೆ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಅವರು ಮಾತನಾಡಿದರು. ದೇವದಾಸಿ ಮಹಿಳೆಯರು ಆರೋಗ್ಯದ ಬಗ್ಗೆ ನಿಗಾವಹಿಸಿ, ಸರ್ಕಾರಿ ಸೌಲಭ್ಯವನ್ನು ಸದುಪಯೋಗ ಮಾಡಿಕೊಳ್ಳುವಂತೆ ಹೇಳಿದರು.


**ಹಂಪಿ ಟೈಮ್ಸ್** SSLC **ಮಾರ್ಗದರ್ಶಿ**
**ಇ-ಪೇಪರ್‌ನಲ್ಲೂ ಲಭ್ಯ**
**ಕೆಳಗಿನ ವಿಳಾಸಕ್ಕೆ ಭೇಟಿ ನೀಡಿ..**
www.hampitimes.com
epaper.hampitimes.com

## ನಿತ್ಯ ಪಂಚಾಂಗ

ಮಾಸ: ಫಾಲ್ಗುಣ । ಸಂವತ್ಸರ: ಕ್ರೋಧಿ

**08–03–2025 – ಶನಿವಾರ**

| | |
|---|---|
| ತಿಥಿ | : ನವಮಿ |
| ಪಕ್ಷ | : ಶುಕ್ಲ |
| ನಕ್ಷತ್ರ | : ಆರಿದ್ರಾ |
| ಯೋಗ | : ಆಯುಷ್ಮಾನ್ |
| ಕರಣ | : ಕೌಳವ |
| ಸೂರ್ಯೋದಯ | : 06:43:31 |
| ಸೂರ್ಯಾಸ್ತ | : 18:32:02 |
| ರಾಹು ಕಾಲ | : 09:41–11:09 |
| ಯಮಘಂಡ ಕಾಲ | : 14:06–15:35 |
| ಗುಳಿಕ ಕಾಲ | : 06:44–08:12 |



## ತುಂಗಭದ್ರಾ ನೀರಿನ ಮಟ್ಟ

ಶುಕ್ರವಾರ : 07–03–2025

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1604.70 ಅಡಿ |
| ಒಳ ಹರಿವು | 0 ಕ್ಯುಸೆಕ್ |
| ಹೊರ ಹರಿವು | 9899 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 28.236 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| **ಕಳೆದ ವರ್ಷ ಇದೇ ದಿನ** | |
| ಇಂದಿನ ಮಟ್ಟ | 1585.73 ಅಡಿ |
| ಒಳ ಹರಿವು | 0 ಕ್ಯುಸೆಕ್ |
| ಹೊರ ಹರಿವು | 2173 ಕ್ಯುಸೆಕ್ |
| ಸಾಮರ್ಥ್ಯ | 7.814 ಟಿಎಂಸಿ |

**ಹಂಪಿ ಟೈಮ್ಸ್**
ವಿಜಯನಗರದ ಹೆಮ್ಮೆ
ನಂ 1
ಜಿಲ್ಲಾಮಟ್ಟದ ದಿನಪತ್ರಿಕೆ

**Expand your brand's reach**
**Wider with Hampi Times!**

**Why Advertise with Us?**

**Widespread Reach** – Thousands of dedicated readers across the region.

**Targeted Local Audience** – Connect with local customers and tourists.

**Affordable & Effective** – Cost-effective ad packages with maximum visibility.

**Print + Digital Impact** – Reach Readers through both newspaper and online platforms.

**Trusted Reputation** – A credible news source with a strong community presence.

**About Hampi Times**
Hampi Times is a leading local Daily newspaper dedicated to delivering accurate and insightful news. With a strong readership across the region, we offer a powerful platform for businesses to reach their target Readers effectively!

We offer Flexible advertising plans to suit your business needs Quarter/half/FullPage Ad

Call Us for more info :M: 9448633038

www.hampitimes.com/epaper.hampitimes.com

**ಹಂಪಿ ಟೈಮ್ಸ್**
ವಿಜಯನಗರದ ಹೆಮ್ಮೆ
ಕನ್ನಡ ದಿನಪತ್ರಿಕೆ

**ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಹೊಸಪೇಟೆ**
**ಹಂಪಿ ಟೈಮ್ಸ್ ಸಹಯೋಗ**

**SSLC 625**
**Guarantee Plan**

**SSLC ವಿದ್ಯಾರ್ಥಿಗಳಿಗಾಗಿ ವಿಶೇಷ ತರಬೇತಿ ಕಾರ್ಯಾಗಾರ**

ಮಾರ್ಚ್ 10 2025
ಸೋಮವಾರ

ಸ್ಥಳ: ಮಹಿಳಾ ಸಮಾಜ ಪ್ರೌಢಶಾಲೆ, ಹೊಸಪೇಟೆ
ಸಮಯ: ಬೆಳಿಗ್ಗೆ 10.00 ರಿಂದ




www.hampitimes.com
epaper.hampitimes.com

ಸೂಚನೆ: ವಿಶೇಷ ತರಬೇತಿಗೆ ಆಯ್ಕೆಯಾದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಈಗಾಗಲೇ ನೀಡಲಾದ ಸೂಚನೆಯಂತೆ ಕಾರ್ಯಾಗಾರದಲ್ಲಿ ಪಾಲ್ಗೊಳ್ಳಬೇಕು. ಹೆಚ್ಚಿನ ಮಾಹಿತಿಗೆ ನಿಮ್ಮ ಶಾಲಾ ಮುಖ್ಯೋಪಾಧ್ಯಾಯರನ್ನು ಸಂಪರ್ಕಿಸಿ.